## 64. ವೃದ್ಧರು, ಬಡವರಿಗೆ ಉಚಿತ ಔಷಧ

ಬಿಬಿಎಂಪಿ ಹೆಲ್ತ್‌ಕೇರ್ ಯೋಜನೆಯಡಿ 24 ಗಂಟೆಗಳ ಆರೋಗ್ಯ ಸೇವೆ ಹಾಗೂ 60 ವರ್ಷ ದಾಟಿದ ವೃದ್ಧರಿಗೆ ಮತ್ತು ಬಿಪಿಎಲ್ ಕುಟುಂಬಗಳಿಗೆ ಉಚಿತವಾಗಿ ಔಷಧ ಒದಗಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಾ: ಸಿ.ಎನ್.ಅಶ್ವತ್ಥನಾರಾಯಣ ತಿಳಿಸಿದ್ದಾರೆ.

ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಆರೋಗ್ಯ ಅಧಿಕಾರಿಗಳ ಜೊತೆ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಪಾಲಿಕೆಯ ಎಲ್ಲ ಆರೋಗ್ಯ ಕೇಂದ್ರಗಳನ್ನು ಸದೃಢಗೊಳಿಸಲು 'ಬಿಬಿಎಂಪಿ ಹೆಲ್ತ್‌ಕೇರ್' ಯೋಜನೆ ಜಾರಿಗೊಳಿಸಲಾಗುತ್ತಿದೆ. ಇದರಡಿ ಪಾಲಿಕೆಯ 198 ವಾರ್ಡ್‌ಗಳು ಹಾಗೂ 133 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಜನೌಷಧ ಕೇಂದ್ರಗಳನ್ನು ತೆರೆಯಬೇಕು. ಈ ಮೂಲಕ ಹಿರಿಯ ನಾಗರಿಕರು ಹಾಗೂ ಬಿಪಿಎಲ್ ಕಾರ್ಡ್‌ದಾರರಿಗೆ ಉಚಿತ ಔಷಧ ಹಾಗೂ ಚಿಕಿತ್ಸಾ ಸೌಲಭ್ಯ ಒದಗಿಸುವಂತೆ ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ನಗರದಲ್ಲಿ ಅಗತ್ಯವಿರುವ ಎಲ್ಲರಿಗೂ ಆರೋಗ್ಯ ವ್ಯವಸ್ಥೆ ಕಲ್ಪಿಸಲು ಪ್ರಾಥಮಿಕ ಆರೋಗ್ಯ ಕೇಂದ್ರಗಳು 24X7 ತೆರೆದು ಚಿಕಿತ್ಸೆ ನೀಡಬೇಕು. ರೋಗ ತಡೆಗೆ ಮುನ್ನೆಚರಿಕಾ ಕ್ರಮಗಳ ಪಾಲನೆ, ಪ್ರಾಥಮಿಕ ಚಿಕಿತ್ಸೆ ಹಾಗೂ ಎಲ್ಲ ಕಾಯಿಲೆಗಳಿಗೂ ಔಷಧ, ರೋಗ ಪತ್ತೆ, ಪರೀಕ್ಷೆ ನಡೆಸಲು ಪ್ರಯೋಗಾಲಯಗಳು ಸಿದ್ಧವಾಗಿರಬೇಕು. ಟೆಲಿ ಮೆಡಿಸಿನ್, ಟೆಲಿ ಕನ್ಸಲ್ಟೇಷನ್ ಸೌಲಭ್ಯದಡಿ ದಾದಿಯರು ಕಾರ್ಯನಿರ್ವಹಿಸಬೇಕು. ಜೊತೆಗೆ ಎಲ್ಲ ಕೇಂದ್ರಗಳಲ್ಲಿ ತಜ್ಞ ವೈದ್ಯರು ಲಭ್ಯವಿರುವಂತೆ ಸೂಚಿಸಲಾಗಿದೆ ಎಂದರು.

**ಮಾಹಿತಿ ದಾಖಲೆ ವ್ಯವಸ್ಥೆ:** ನಗರದ 133 ಪಿಹೆಚ್‌ಸಿಗಳ ಆರೋಗ್ಯ ವರದಿ ಸಂಗ್ರಹಿಸಿ ಇಡಲಾಗುತ್ತಿದೆ. ಅದರ ಜೊತೆಗೆ ಆರೋಗ್ಯ ಕಾರ್ಯಕರ್ತರು ಮನೆಮನೆಗೆ ತೆರಳಿ ಸಂಗ್ರಹಿಸುವ ಪ್ರತಿ ವ್ಯಕ್ತಿಯ ಆರೋಗ್ಯ ವಿವರಗಳ ದಾಖಲೆ ಸಿದ್ಧವಾಗಬೇಕು. ಜೊತೆಗೆ ಎಲ್ಲ ಖಾಸಗಿ ಡಯಾಗ್ನಾಸ್ಟಿಕ್ ಸೆಂಟರ್ ಮತ್ತು ಲ್ಯಾಬ್‌ಗಳಲ್ಲಿ ನಡೆಯುವ ಪರೀಕ್ಷೆಗಳು, ಆರೋಗ್ಯ ತಪಾಸಣೆ ವಿವರ ಬಿಬಿಎಂಪಿಗೆ ಪ್ರತಿನಿತ್ಯ ನೀಡಬೇಕು. ಆರೋಗ್ಯ ವಿಚಾರದ ಯಾವುದೇ ಬೆಳವಣಿಗೆ ಬಗ್ಗೆ ಬಿಬಿಎಂಪಿಗೆ ಸಂಪೂರ್ಣ ಮಾಹಿತಿ ಸಂಗ್ರಹವಾಗುವಂತೆ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪಾಲಿಕೆ, ಆರೋಗ್ಯ ಕೇಂದ್ರಗಳಿಗೆ ಮಾಸ್ಕ್, ಸ್ಯಾನಿಟೈಸರ್, ಪಿಪಿಇ ಕಿಟ್, ಥರ್ಮಲ್ ಸ್ಕ್ಯಾನರ್‌ಗಳನ್ನು ಸರಬರಾಜು ಮಾಡಲಾಗಿದೆ. ಪ್ರಾಥಮಿಕ ಹೆರಿಗೆ ಆಸ್ಪತ್ರೆ ಹಾಗೂ ರೆಫರಲ್ ಆಸ್ಪತ್ರೆಗಳಲ್ಲಿ ಆಮ್ಲಜನಕ ಸಿಲಿಂಡರ್ ಲಭ್ಯವಿರುವಂತೆ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಾ: ಅಶ್ವತ್ಥನಾರಾಯಣ ತಿಳಿಸಿರುತ್ತಾರೆ.

ಆಧಾರ:ವಿಜಯವಾಣಿ, ದಿನಾಂಕ:14.05.2020